ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಾರಿಗೆ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE 21/5/20



ಉಪ ಮುಖ್ಯಮಂತ್ರಿ ಲಕ್ಷ್ಮಣ ಸವದಿ ಅವರು ಸಾರಿಗೆ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಖಾಸಗಿ ವಾಹನಗಳಿಗೆ ತೆರಿಗೆ ವಿನಾಯ್ತಿ ನೀಡುವ ಕುರಿತು ಚರ್ಚೆ ನಡೆಸಿದರು. 20/5/20

# ಖಾಸಗಿ ಬಸ್‌ಗಳಿಗೆ ಎರಡು ತಿಂಗಳು ತೆರಿಗೆ ವಿನಾಯ್ತಿ

ಸಂ.ಕ. ಸಮಾಚಾರ ಬೆಂಗಳೂರು:

ರಾಜ್ಯದಲ್ಲಿ ಲಾಕ್‌ಡೌನ್ ಜಾರಿಯಲ್ಲಿರುವುದರಿಂದ ಕೆಲವು ಖಾಸಗಿ ವಾಹನಗಳಿಗೆ ಎರಡು ತಿಂಗಳ ಕಾಲ ತೆರಿಗೆ ವಿನಾಯ್ತಿ ನೀಡಿ ಸರ್ಕಾರ ಆದೇಶ ನೀಡಿದೆ.

ಕರ್ನಾಟಕದಲ್ಲಿ ನೋಂದಣಿ ಮಾಡಿಕೊಂಡಿರುವ ಸರಕು ಸಾಗಣೆ, ಪ್ರಯಾಣಿಕರ ಸಾಗಣೆ ವಾಹನಗಳಿಗೆ ಅನ್ವಯವಾಗುವಂತೆ ಮಾರ್ಚ್ 24ರಿಂದ ಮೇ 23ರವರೆಗೆ ತೆರಿಗೆ ವಿನಾಯ್ತಿ ನೀಡಲಾಗಿದೆ. ಈಗಾಗಲೇ ತೆರಿಗೆ ಪಾವತಿ ಮಾಡಿದ್ದಲ್ಲಿ ಅದನ್ನು ಮುಂದಿನ ತಿಂಗಳ ಲೆಕ್ಕಕ್ಕೆ ಅಂದರೆ ಜೂನ್ ತಿಂಗಳಿಗೆ ಅನ್ವಯವಾಗುವಂತೆ ಲೆಕ್ಕಕ್ಕೆ ತೆಗೆದುಕೊಳ್ಳಲಾಗುತ್ತದೆ ಎಂದು ತಿಳಿಸಿದೆ.

ಈ ಕುರಿತು ಸಾರಿಗೆ ಸಚಿವರೂ ಆಗಿರುವ ಲಕ್ಷ್ಮಣ ಸವದಿ ಅವರು ಸುದ್ದಿಗಾರರಿಗೆ ವಿವರಿಸಿ, ಲಾಕ್‌ಡೌನ್ ಸಂದರ್ಭದಲ್ಲಿ ಖಾಸಗಿ ಬಸ್‌ಗಳು ಹಾಗೂ ಸರಕು ಸಾಗಣೆ ವಾಹನಗಳ ಮಾಲೀಕರು ನಷ್ಟ ಅನುಭವಿಸಿರುವುದಾಗಿ ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಇಂತಹ ಸಂದರ್ಭವನ್ನು ವಿಶೇಷ ಪ್ರಕರಣವೆಂದು ಪರಿಗಣಿಸಲಾಗಿದೆ. ಹಾಗೆಯೇ ತಡ ಪಾವತಿಗಾಗಿ ಯಾವುದೇ ದಂಡವನ್ನು ವಿಧಿಸಲಾಗುವುದಿಲ್ಲ. ಎರಡು ತಿಂಗಳ ಕಾಲ ತೆರಿಗೆ ವಿನಾಯ್ತಿ ನೀಡಿರುವುದರಿಂದ ದಂಡವೂ ಅನ್ವಯವಾಗುವುದಿಲ್ಲ ಎಂದು ವಿವರಿಸಿದರು.